# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಕಾರ್ಯದರ್ಶಿ, ವಾರ್ಡ್ ಸಮಿತಿ /ಸಹಾಯಕ ಇಂಜಿನಿಯರ್‌ರವರ ಕಛೇರಿ, ಶಂಕರಮಠ ವಾರ್ಡ್ ಸಂಖ್ಯೆ: 75,
15ನೇ ಮುಖ್ಯರಸ್ತೆ, 4ನೇ ಅಡ್ಡರಸ್ತೆ, ಕಿರ್ಲೋಸ್ಕರ್ ಕಾಲೋನಿ, 3ನೇ ಹಂತ, ಬೆಂಗಳೂರು-79.

ಸಂಖ್ಯೆ: ವಾ-75/ವಾ.ಸ./ಸಭಾನಡವಳಿ-06/2021-22 ದಿನಾಂಕ: 19/06/2021

-:ಸಭೆಯ ನಡವಳಿಗಳು:-

ಮಾನ್ಯ ನೋಡಲ್ ಅಧಿಕಾರಿಯವರ ಆದೇಶದಂತೆ, ದಿನಾಂಕ: 19/06/2021 ಶನಿವಾರದಂದು ಬೆಳಿಗ್ಗೆ 11.30 ಘಂಟೆಗೆ ವಾರ್ಡ್-75 ಶಂಕರಮಠದ ವಾರ್ಡ್ ಮಟ್ಟದ ಸಮಿತಿ ಸಭೆಯನ್ನು ಆಯೋಜಿಸಲಾಯಿತು.

ಶ್ರೀ ಪುಟ್ಟಸ್ವಾಮಿ ಸಮಿತಿಯ, ಕಾರ್ಯದರ್ಶಿಗಳು ರವರು ಸಭೆಯನ್ನು ನಡೆಸುತ್ತಾ, ಸಾರ್ವಜನಿಕರ ಕುಂದು ಕೊರತೆಗಳು ಹಾಗೂ ವಾರ್ಡ್ ಅಭಿವೃದ್ಧಿಗೆ ಸಂಭಂದಿಸಿದಂತೆ ಹಾಗೂ ಕೋವಿಡ್-19 ವೈರಸ್‌ನ ಸೋಂಕಿನ ಬಗ್ಗೆ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದು, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಹಾಗೂ ಸಾರ್ವಜನಿಕರ ಹಿತರಕ್ಷಣೆಗಾಗಿ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಬಗ್ಗೆ ಚರ್ಚಿಸಲು ಸಭೆಯಲ್ಲಿ ಉಪಸ್ಥಿತರಾಗಿರುವ ಮಾನ್ಯ ನೋಡಲ್ ಅಧಿಕಾರಿಯವರಿಗೆ ಮತ್ತು ಸಭೆಗೆ ಆಗಮಿಸಿರುವ ಎಲ್ಲಾ ಅಧಿಕಾರಿಗಳಿಗೆ ಸಭೆಗೆ ಸ್ವಾಗತ ಕೋರುತ್ತಾ, ಮಾನ್ಯ ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಸಭೆಯನ್ನು ಮುನ್ನಡೆಸಲಾಯಿತು.

**<u>ಸಭೆಯಲ್ಲಿ ಹಾಜರಿದ್ದವರು:</u>**

| | |
|---|---|
| 1 | ಶ್ರೀ. ಎಲ್. ಸುರೇಶ್, ನೋಡಲ್ ಅಧಿಕಾರಿಗಳು ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರು, ವಾರ್ಡ್-75, ಬಿಬಿಎಂಪಿ |
| 2 | ಶ್ರೀ ಪುಟ್ಟಸ್ವಾಮಿ, ಸಮಿತಿ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ವಾರ್ಡ್-75, ಬಿಬಿಎಂಪಿ |
| 3 | ಶ್ರೀ ಎಸ್.ಲೋಕೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ |
| 4 | ಶ್ರೀ ಸುನೀಲ್ ಕುಮಾರ್ ಕೆ.ಎಸ್., ಕಂದಾಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 5 | ಶ್ರೀ ಸಿದ್ದರಾಮೇಶ್ವರ್, ಕಂದಾಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 6 | ಶ್ರೀ ಅನೀಲ್ ಕುಮಾರ್ ಕೆ.ಎಲ್. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್-75, ಬಿಬಿಎಂಪಿ. |
| 7 | ಶ್ರೀಮತಿ ಪೂಜಾಶ್ರೀ ಪಿ. ಎಲ್.ಹೆಚ್.ವಿ., ವಾರ್ಡ್-75, ಆರೋಗ್ಯ ಇಲಾಖೆ, ಬಿಬಿಎಂಪಿ. |
| 8 | ಶ್ರೀಮತಿ ಮಂಜುಳಾ ಎಸ್. ಜೂ.ಹೆಚ್.ಎ, ವಾರ್ಡ್-75, ಆರೋಗ್ಯ ಇಲಾಖೆ, ಬಿಬಿಎಂಪಿ. |
| 9 | ಶ್ರೀ ಎ. ಪಾಂಡುರಂಗ, ಕಿರಿಯ ಅಭಿಯಂತರರು, ಬೆಸ್ಕಾಂ, ಎನ್-3. |
| 10 | ಶ್ರೀ ಬರಡೀ ಶಿವಪ್ಪ, ಕಾಮಗಾರಿ ಪರಿವೀಕ್ಷಕರು, ಎನ್.ಡಬ್ಲ್ಯೂ-1, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 11 | ಶ್ರೀ ಹನುಮಂತ ವಿ., ಕಾಮಗಾರಿ ಪರಿವೀಕ್ಷಕರು, ಎನ್.ಡಬ್ಲ್ಯೂ-2, ಬಿ.ಡಬ್ಲ್ಯೂ.ಎಸ್.ಎಸ್.ಬಿ. |
| 12 | ಶ್ರೀ ಚನ್ನವೀರಯ್ಯ, ಹೆಡ್ ಗ್ಯಾಂಗ್‌ಮನ್, ವಾರ್ಡ್-75, ಬಿಬಿಎಂಪಿ. |
| 13 | ಶ್ರೀ ಮಂಜುನಾಥ್ ಎನ್., ಮೇಸ್ತ್ರಿ, ತೋಟಗಾರಿಕೆ ಇಲಾಖೆ, ಬಿಬಿಎಂಪಿ. |
| 14 | ಶ್ರೀ ಮಲ್ಲಪ್ಪ, ಮೇಸ್ತ್ರಿ, ಅರಣ್ಯ ಇಲಾಖೆ, ಬಿಬಿಎಂಪಿ. |
| 15 | ಶ್ರೀ ಗಂಗಾಧರ್ ಆಚಾರ್ ಜೆ., ವಾರ್ಡ್ ಮಾರ್ಷಲ್, ಬಿಬಿಎಂಪಿ. |
| 16 | ಶ್ರೀ ನಸೀರ್ ಪಾಷ, ಬೀದಿ ದೀಪಗಳ ನಿರ್ವಹಣಾ ಗುತ್ತಿಗೆದಾರರು, ಬಿಬಿಎಂಪಿ. |
| 17 | ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು, ವಾರ್ಡ್-75. |
| 18 | ಶ್ರೀ ಮಂಜುನಾಥ್ ಆರ್, ವಾರ್ಡ್‌ನ ನಾಗರೀಕರು, ವಾರ್ಡ್-75. |

ಪು.ತಿ.ನೋ.

Scanned by CamScanner

**ಸಭೆಯಲ್ಲಿ ಚರ್ಚಿಸಲಾದ ವಿಷಯಗಳು:-**

1 **ಆರೋಗ್ಯ ಇಲಾಖೆ ಮತ್ತು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ ಮಾತನಾಡುತ್ತಾ, ವಾರ್ಡ್-75 ಶಂಕರಮಠದಲ್ಲಿ ಕೋವಿಡ್-19ಗೆ ಸಂಭಂಧಿಸಿದಂತೆ ಮಾಹಿತಿಗಳ ವಿವರಣೆ ನೀಡುವಂತೆ ಸಭೆಯಲ್ಲಿ ತಿಳಿಸಿದರು.
- ಶ್ರೀಎಸ್.ಲೋಕೇಶ್, ಹಿರಿಯ ಆರೋಗ್ಯ ಪರಿವೀಕ್ಷಕರು ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ 45 ವರ್ಷ ಮೇಲ್ಪಟ್ಟ ಸಾರ್ವಜನಿಕರಿಗೆ 2ನೇ ಡೋಸ್ ವ್ಯಾಕ್ಸಿನೇಷನ್ ನೀಡಲಾಗುತ್ತಿದೆ. ಮತ್ತು ಕೋವಿಡ್-19 ಸೋಂಕಿತರನ್ನು ಪತ್ತೆಹಚ್ಚಲು ಪರೀಕ್ಷೆಗಳನ್ನು ಹೆಚ್ಚಾಗಿ ಕೈಗೊಳ್ಳಲಾಗುತ್ತಿದೆ ಎಂದು ಸಭೆಯಲ್ಲಿ ತಿಳಿಸಿದರು.
- ಶ್ರೀಮತಿ ಪೂಜಾಶ್ರೀ ಪಿ., ಎಲ್.ಹೆಚ್.ವಿ. ವಾರ್ಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ 45 ವರ್ಷ ಮೇಲ್ಪಟ್ಟ ಸಾರ್ವಜನಿಕರ ವ್ಯಾಕ್ಸಿನೇಷನ್ ಬಗ್ಗೆ ಆಶಾ ಕಾರ್ಯಕರ್ತೆಯರಿಂದ ಮನೆಯಿಂದ ಮನೆಗೆ ಸರ್ವೆಯನ್ನು ಮಾಡಿಸಲಾಗುತ್ತಿದೆ. ಹಾಗೂ ವ್ಯಾಕ್ಸಿನೇಷನ್ ಮಾಡಿಸಿಕೊಳ್ಳದಿದ್ದಲ್ಲಿ ಅಂತಹವರಿಗೆ ವ್ಯಾಕ್ಸಿನ್ ಮಾಡಿಸಿಕೊಳ್ಳುವಂತೆ ಜಾಗೃತಿ ಮೂಡಿಸಲಾಗುತ್ತಿದೆ. ಮುಂದುವರೆದು, ವಾರ್ಡ್ ವ್ಯಾಪ್ತಿಯಲ್ಲಿ ಪ್ರೈಮರಿ ಹೆಲ್ತ್ ಸೆಂಟರ್ ಅನ್ನು ಸ್ಥಾಪಿಸಿದ್ದಲ್ಲಿ ತುಂಬಾ ಉಪಯುಕ್ತವಾಗಿರುತ್ತದೆ ಎಂದು ಸಭೆಯಲ್ಲಿ ತಿಳಿಸಿದರು.
- ಶ್ರೀಸುನೀಲ್ ಕುಮಾರ್ ಕೆ.ಎಸ್, ಕಂದಾಯ ಪರಿವೀಕ್ಷಕರು, ವಾರ್ಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಹೋಮ್ ಐಸೋಲೇಷನ್ ಮತ್ತು ಆಸ್ಪಿಟಲೈಜೇಷನ್‌ನಲ್ಲಿರುವ ಕೋವಿಡ್-19 ಸೋಂಕಿತರ ಮಾಹಿತಿಗಳನ್ನು ಹಾಗೂ ಪ್ರಥಮ ಮತ್ತು ದ್ವಿತೀಯ ಸಂಪರ್ಕಿತರ ಮಾಹಿತಿಗಳನ್ನು ಸಂಗ್ರಹಿಸುತ್ತಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ಸಭೆಯಲ್ಲಿ ಹಾಜರಿದ್ದ ಎಲ್ಲಾ ಸದಸ್ಯರು ಮತ್ತು ಅಧಿಕಾರಿಗಳು ಹಾಗೂ ನಾಗರೀಕರು ಕರ್ನಾಟಕ ಬಡಾವಣೆ 2ನೇ ಹಂತದಲ್ಲಿರುವ ಖಾಲಿ ಜಾಗದಲ್ಲಿ ಆಸ್ಪತ್ರೆಯನ್ನು ನಿರ್ಮಿಸುವ ಕುರಿತು ಪ್ರಸ್ತಾಪಿಸಿದರು.

2 **ಅಭಿಯಂತರರ ವಿಭಾಗದ ಬಗ್ಗೆ:-**

- ಶ್ರೀ ಮಂಜುನಾಥ್ ಆರ್. ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ಸತ್ಯನಾರಾಯಣ ಬಡಾವಣೆ 1ನೇ ಡಿ ಅಡ್ಡರಸ್ತೆಯಲ್ಲಿ ಡೆಬ್ರಿಸ್ ಅನ್ನು ತೆರವುಗೊಳಿಸುವಂತೆ ಕೋರಿದರು.
- ಮಾನ್ಯ ನೋಡೆಲ್ ಅಧಿಕಾರಿಯವರು ಮಾತನಾಡುತ್ತಾ, ಸ್ಥಳ ಪರಿಶೀಲಿಸಿ ಡೆಬ್ರಿಸ್ ತೆರವುಗೊಳಿಸಲು ಕ್ರಮವಹಿಸುವಂತೆ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಮಳೆಗಾಲವಿರುವುದರಿಂದ ವಾರ್ಡ್‌ನಲ್ಲಿನ ಪ್ರವಾಹ ಉಂಟಾಗುವ ಪ್ರದೇಶಗಳಲ್ಲಿ ಮುನ್ನೆಚ್ಚರಿಕಾ ಕ್ರಮವಾಗಿ ಚರಂಡಿಗಳಲ್ಲಿ ಸಿಲ್ಟ್ ತೆರವುಗೊಳಿಸುವುದು ಹಾಗೂ ಇನ್ನಿತರ ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕಾಗಿ ಸಹಾಯಕ ಅಭಿಯಂತರರಿಗೆ ಸಭೆಯಲ್ಲಿ ತಿಳಿಸಿದರು.
- ಸಹಾಯಕ ಅಭಿಂಯಂತರರು ಮಾತನಾಡುತ್ತಾ, ಈಗಾಗಲೇ ಪ್ರವಾಹ ಉಂಟಾಗುವ ಪ್ರದೇಶಗಳ ಚರಂಡಿಗಳಲ್ಲಿ ಹೂಳು ತೆಗೆಯಲಾಗಿರುತ್ತದೆ. ಹಾಗೂ ಮಳೆಗಾಲದ ಪ್ರಯುಕ್ತ ಉಪ ವಿಭಾಗದ ವತಿಯಿಂದ ತಾತ್ಕಾಲಿಕ ನಿಯಂತ್ರಕರನ್ನು ಆಯೋಜಿಸಲಾಗಿದ್ದು, ಯಾವುದೇ ದೂರು ಬಂದ ಕೂಡಲೇ ಸ್ಥಳಕ್ಕೆ ಹಾಜರಾಗಿ ನೀರನ್ನು ತೆರವುಗೊಳಿಸುವುದು ಹಾಗೂ ರಸ್ತೆಯ ಬದಿಯಲ್ಲಿನ ಡೆಬ್ರಿಸ್ ಹಾಗೂ ಶೌಲ್ಡರ್ ಡ್ರೈನ್ ಕ್ಲೀನಿಂಗ್ ಕಾರ್ಯಗಳನ್ನು ಹಮ್ಮಿಕೊಂಡಿರುವುದಾಗಿ ಸಭೆಯಲ್ಲಿ ತಿಳಿಸಿದರು.

3 **ವಿದ್ಯುತ್ ವಿಭಾಗದ ಬಗ್ಗೆ:-**

- ಶ್ರೀ ಸಿದ್ದರಾಜು ಸೋಸಲೆ ಮತ್ತು ಶ್ರಿ ಆರ್. ಮಂಜುನಾಥ್, ವಾರ್ಡ್‌ನ ನಾಗರೀಕರು ಮಾತನಾಡುತ್ತಾ, ಅರಬಿಂದೋ ವಿದ್ಯಾ ಮಂದಿರದ ಸುತ್ತಮುತ್ತ ರಸ್ತೆಗಲಲ್ಲಿ ಮತ್ತು ಕಿರ್ಲೋಸ್ಕರ್ ಕಾಲೋನಿ 1ನೇ ಹಂತ 1ನೇ ಅಡ್ಡರಸ್ತೆಯಲ್ಲಿ ಬೀದಿ ದೀಪಗಳು ಕಾರ್ಯನಿರ್ವಹಿಸುತ್ತಿರುವುದಿಲ್ಲವಾಗಿ ಸಭೆಯಲ್ಲಿ ದೂರಿದರು.
- ಶ್ರೀ ನಸೀರ್ ಪಾಷ, ಬೀದಿ ದೀಪಗಳ ನಿರ್ವಹಣಾ ಗುತ್ತಿಗೆದಾರರು ರವರು ಮಾತನಾಡುತ್ತಾ, ಸದರಿ ಸ್ಥಳಗಳನ್ನು ಈಗಾಗಲೇ ಪರಿಶೀಲಿಸಲಾಗಿದ್ದು, ಲಾಕ್‌ಡೌನ್ ಇರುವ ಕಾರಣ ಬೇಕಾಗಿರುವ ಸಾಮಾಗ್ರಿಗಳು ಲಭ್ಯವಿರುವುದಿಲ್ಲ ಆದುದರಿಂದ ಇನ್ನೆರಡು ದಿನಗಳಲ್ಲಿ ಸದರಿ ದೂರುಗಳನ್ನು ಬಗೆಹರಿಸಿ ವರದಿ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು.

ಮು.ತಿ.ನೋ.

Scanned by CamScanner

4 **ಪಶುಪಾಲನೆ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಮಾಂಸದ ಅಂಗಡಿಗಳಿಗೆ ತ್ಯಾಜ್ಯಗಳನ್ನು ಸರಿಯಾದ ರೀತಿಯಲ್ಲಿ ವಿಲೇವಾರಿ ಮಾಡಲು ಸೂಕ್ತ ಕ್ರಮವಹಿಸುವಂತೆ ಶ್ರೀ ಲೋಕೇಶ್ ಕೆ.ವಿ. ಹಿರಿಯ ವೆಟರಿನರಿ ಪರಿವೀಕ್ಷಕರು ರವರಿಗೆ ತಿಳಿಸಲು ಸಭಾ ಕಾರ್ಯದರ್ಶಿ ರವರಿಗೆ ಹೇಳಿದರು.

5 **ಕಂದಾಯ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ಎಂದಿನಂತೆ ವಾರ್ಡ್ ವ್ಯಾಪ್ತಿಯಲ್ಲಿ ಸಂಗ್ರಹವಾದ ಕಂದಾಯದ ಮೊತ್ತ ಹಾಗೂ ಕಂದಾಯ ಸಂಗ್ರಹಣೆಗಾಗಿ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ವರದಿ ನೀಡುವಂತೆ ಕಂದಾಯ ಪರಿವೀಕ್ಷಕರು ವಾರ್ಡ್-75 ರವರಿಗೆ ತಿಳಿಸಿದರು.
- ಶ್ರೀ ಸಿದ್ದರಾಮೇಶ್ವರ್ ಮತ್ತು ಸುನೀಲ್ ಕುಮಾರ್, ಕಂದಾಯ ಪರಿವೀಕ್ಷಕರು ವಾಡ್-75 ರವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಸರಿಯಾದ ರೀತಿಯಲ್ಲಿ ಕಂದಾಯ ಸಂಗ್ರಹಣೆಯಾಗುತ್ತಿದ್ದು, 01-ಏಪ್ರಿಲ್-2021 ರಿಂದ 19- ಜೂನ್-2021ರ ವರೆಗೆ ಬಾಕಿ ಹಾಗೂ ಪ್ರಸ್ತುತ ಸಾಲಿನ ಒಟ್ಟು ಮೊತ್ತ ರೂ. 2.60 ಕೋಟಿಗಳಷ್ಟು ಕಂದಾಯ ಸಂಗ್ರಹವಾಗಿರುವುದಾಗಿ ತಿಳಿಸುತ್ತಾ, ಕಂದಾಯದ ವಿವರಗಳನ್ನು ಸಭೆಯಲ್ಲಿ ಸಲ್ಲಿಸಿದರು.

6 **ಘನತ್ಯಾಜ್ಯ ನಿರ್ವಹಣೆ ವಿಭಾಗದ ಬಗ್ಗೆ:-**

- ಮಾನ್ಯ ನೋಡಲ್ ಅಧಿಕಾರಿಯವರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕಸ ವಿಲೇವಾರಿಗೆ ಸಂಬಂಧಿಸಿದಂತೆ ಸಮಿತಿಯ ವಾಟ್ಸ್ಆಪ್ ಗ್ರೂಪ್‌ನಲ್ಲಿ ದಾಖಲಾಗಿರುವ ದೂರುಗಳಿಗೆ ಸೂಕ್ತ ಕ್ರಮವಹಿಸುವಂತೆ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ತಿಳಿಸಲು ಸಭಾಕಾರ್ಯದರ್ಶಿಗಳಿಗೆ ಸಭೆಯಲ್ಲಿ ತಿಳಿಸಿದರು.

7 **ತೋಟಗಾರಿಕೆ ವಿಭಾಗದ ಬಗ್ಗೆ:-**

- ಶ್ರೀ ಸಿದ್ದರಾಜು ಸೋಸಲೆ, ವಾರ್ಡ್‌ನ ನಾಗರೀಕರು ರವರು ಮಾತನಾಡುತ್ತಾ, ಹಿಂದಿನ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯ ಪೈಪ್‌ಲೈನ್ ರಸ್ತೆಯ ಉದ್ಯಾನವನಗಳಲ್ಲಿ ಹಾಗೂ ಸಾಂಬವ ಮೂರ್ತಿ ಉದ್ಯಾನವನಗಳಲ್ಲಿ ಹೆಚ್ಚಾಗಿ ಕಸ ಬಿದ್ದಿದ್ದು ಸರಿಯಾದ ರೀತಿಯಲ್ಲಿ ನಿರ್ವಹಣೆಯನ್ನು ಮಾಡುತ್ತಿರುವುದಿಲ್ಲವೆಂದು ತಿಳಿಸಲಾಗಿದ್ದು ಈವರೆವಿಗೂ ಯಾವುದೇ ಕ್ರಮವನ್ನಬು ವಹಿಸಿರುವುದಿಲ್ಲ ಎಂದು ಸಭೆಯಲ್ಲಿ ದೂರಿದರು.
- ಮಾನ್ಯ ನೋಡೆಲ್ ಅಧಿಕಾರಿರವರು ತೋಟಗಾರಿಕೆ ಪರಿವಿಕ್ಷಕರನ್ನು ದೂರವಾಣಿಯ ಮುಖಾಂತರ ಸಂಪರ್ಕಿಸಿ ಮಾತನಾಡುತ್ತಾ, ಶೀಘ್ರವಾಗಿ ಸದರಿ ಸ್ಥಳಗಳನ್ನು ಪರಿಶೀಲಿಸಿ ಸೂಕ್ತ ಕ್ರಮ ವಹಿಸುವಂತೆ ತಿಳಿಸುತ್ತಾ ಇಲ್ಲವಾದಲ್ಲಿ ಸಮಿತಿಯ ವತಿಯಿಂದ ತಮಗೆ ನೋಟೀಸ್ ಜಾರಿ ಮಾಡುವುದಾಗಿ ಸಭೆಯಲ್ಲಿ ತಿಳಿಸಿದರು.

8 **ಅರಣ್ಯ ವಿಭಾಗದ ಬಗ್ಗೆ:-**

- ಸಹಾಯಕ ಅಭಿಯಂತರರು ಹಾಗೂ ಕಾರ್ಯದರ್ಶಿಗಳು ವಾರ್ಡ್-75 ರವರು ಮಾತನಾಡುತ್ತಾ, ಕುರುಬರಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಪಕ್ಕದಲ್ಲಿರುವ ಮರದ ಒಣಗಿದ ರೆಂಬೆಗಳು ಬಿಳುವ ಸ್ಥಿತಿಯಲ್ಲಿದ್ದು ಶೀಘ್ರವಾಗಿ ರೆಂಬೆಗಳನ್ನು ಕತ್ತರಿಸುವಂತೆ ಶಾಲಾ ಮುಖ್ಯೋಪಾಧ್ಯಾಯರು ಪತ್ರ ಬರೆದಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ಸದರಿ ಸ್ಥಳವನ್ನು ಪರಿಶೀಲಿಸಿ ಶೀಘ್ರವಾಗಿ ಅಪಾಯದ ಸ್ಥಿತಿಯಲ್ಲಿರುವ ರೆಂಬೆಗಳನ್ನು ಗುರುತಿಸಿ ಕತ್ತರಿಸಲು ಕ್ರಮ ವಹಿಸಬೇಕಾಗಿ ಸಭೆಯಲ್ಲಿ ಹಾಜರಿದ್ದ ಶ್ರೀ ಮಲ್ಲಪ್ಪ ರವರಿಗೆ ಸೂಚಿಸಲಾಯಿತು.

9 **ಬೆಸ್ಕಾಂ ವಿಭಾಗದ ಬಗ್ಗೆ:-**

- ಮಾನ್ಯ ನೋಡೆಲ್ ಅಧಿಕಾರಿ ರವರು ಮಾತನಾಡುತ್ತಾ, ವಾರ್ಡ್ ಸಮಿತಿಯ ವಾಟ್ಸ್ಆಪ್ ಗ್ರೂಪ್‌ನಲ್ಲಿ ಬರುವಂತಹ ದೂರುಗಳಿಗೆ ಶೀಘ್ರವಾಗಿ ಪ್ರತಿಕ್ರಿಯೆ ನೀಡಿ ಸೂಕ್ತ ಕ್ರಮದೊಂದಿಗೆ ಕೂಡಲೇ ಬಗೆಹರಿಸಲು ಕ್ರಮವಹಿಸಬೇಕಾಗಿ ಸಭೆಯಲ್ಲಿ ತಿಳಿಸಿದರು.

ಪು.ತಿ.ನೋ.

Scanned by CamScanner

10 **ಬಿ.ಡಬ್ಲ್ಯೂ.ಎಸ್.ಎಸ್.ಬಿ. ವಿಭಾಗದ ಬಗ್ಗೆ:-**

- ಸಹಾಯಕ ಅಭಿಯಂತರರು ಮಾತನಾಡುತ್ತಾ, 15ನೇ ಮುಖ್ಯರಸ್ತೆ 3ನೇ ಅಡ್ಡರಸ್ತೆಯಲ್ಲಿ ಸ್ಯಾನಿಟರಿ ಲೈನ್‌ನಲ್ಲಿ ದೊಡ್ಡದಾದ ಗುಂಡಿಯು ಮಾರ್ಪಾಡಾಗಿದ್ದು, ಇದರಿಂದಾಗಿ ರಸ್ತೆಯಲ್ಲಿ ವಾಹನ ಸಂಚಾಲಕರಿಗೆ ತೊಂದರೆಯಾಗುತ್ತಿರುವುದಾಗಿ ಸಾರ್ವಜನಿಕರಿಂದ ದೂರು ಬಂದಿರುವುದಾಗಿ ಸಭೆಯಲ್ಲಿ ತಿಳಿಸಿದರು.
- ಶ್ರೀಬರಡೀಶಿವಪ್ಪ, ಕಾಮಗಾರಿ ಪರಿವೀಕ್ಷಕರು, ಬಿ.ಡಬ್ಲ್ಯೂ.ಎಸ್.ಎಸ್.ಬಿ. ರವರು ಮಾತನಾಡುತ್ತಾ, ಸದರಿ ದೂರನ್ನು ಶೀಘ್ರವಾಗಿ ಪರಿಹರಿಸುವ ಬಗ್ಗೆ ಮೇಲಾಧಿಕಾರಿಗಳಿಗೆ ಚರ್ಚಿಸುವುದಾಗಿ ಮತ್ತು ಶೀಘ್ರವಾಗಿ ಸೂಕ್ತ ಕ್ರಮವಹಿಸುವುದಾಗಿ ಸಭೆಯಲ್ಲಿ ತಿಳಿಸಿದರು.

ಮುಂದುವರೆದು, ಪ್ರತೀ ಸಭೆಯ ಸಭಾ ನಡವಳಿಗಳನ್ನು ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳಿಗೆ ತಲುಪುವಂತೆ ಮಾಡಲು ಕಾರ್ಯದರ್ಶಿ ರವರಿಗೆ ಸೂಚಿಸಿದರು. ವಾರ್ಡ್‌ಗೆ ಸಂಬಂಧಿಸಿದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಸಭಾ ನಡವಳಿಗಳಿಗೆ ಅನುಸಾರವಾಗಿ ತಮ್ಮ ಇಲಾಖೆಗೆ ಸಂಬಂಧಿಸಿದ ದೂರುಗಳನ್ನು ಪಟ್ಟಿ ಮಾಡಿಕೊಂಡು, ಸದರಿ ದೂರುಗಳನ್ನು ಸರಿಪಡಿಸಿರುವ ಬಗ್ಗೆ ಅಥವಾ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಟಿಪ್ಪಣಿಯೊಂದಿಗೆ ದಾಖಲಾತಿಗಳನ್ನು ದೃಢೀಕರಿಸಿ ಕಡತದಲ್ಲಿ ತಪ್ಪದೇ **ಪ್ರತೀ ವಾರ್ಡ್ ಸಮಿತಿ ಸಭೆಯಲ್ಲಿ** ವರದಿ ಮಾಡಲು ಹಾಗೂ **ವಾರ್ಡ್ ಕಮಿಟಿ ವಾರ್ಡ್-75 ವಾಟ್ಸ್ ಆಪ್ ಗ್ರೂಪ್** ನಲ್ಲಿ ವರದಿ ಮಾಡಲು ಸೂಚಿಸುತ್ತಾ, ಸಭೆಯನ್ನು ಮುಕ್ತಾಯ ಗೊಳಿಸಲಾಯಿತು. ಕೊನೆಯಲ್ಲಿ ಕಾರ್ಯದರ್ಶಿಗಳು ಸಭೆಗೆ ಆಗಮಿಸಿರುವ ಎಲ್ಲರಿಗೂ ವಂದಿಸಿದರು.

ನೋಡಲ್ ಅಧಿಕಾರಿರವರ ಅನುಮೋದನೆ ಮೇರೆಗೆ )

ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು,
ವಾರ್ಡ್ ಸಂಖ್ಯೆ: 75

**ಪ್ರತಿಯನ್ನು :-**

1. ಮಾನ್ಯ ವಲಯ ವಿಶೇಷ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
2. ಮಾನ್ಯ ಜಂಟಿ ಆಯುಕ್ತರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಆಪ್ತ ಕಾರ್ಯದರ್ಶಿರವರಿಗೆ ಸಲ್ಲಿಸಿದೆ.
3. ಮಾನ್ಯ ಮುಖ್ಯ ಅಭಿಯಂತರರು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ತಾಂತ್ರಿಕ ಸಹಾಯಕರಿಗೆ ಸಲ್ಲಿಸಿದೆ.
4. ಮಾನ್ಯ ಆರೋಗ್ಯ ಅಧಿಕಾರಿಗಳು, ಪಶ್ಚಿಮ ವಲಯ ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
5. ಮಾನ್ಯ ಅಧೀಕ್ಷಕ ಅಭಿಯಂತರರು, (ಘನತ್ಯಾಜ್ಯ ನಿರ್ವಹಣೆ) ರವರ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
6. ಮಾನ್ಯ ಅರಣ್ಯಾಧಿಕಾರಿಗಳು, ಅರಣ್ಯ ವಿಭಾಗ ರವರಿಗೆ ಅವಗಾಹನೆಗೆ ತರಲು ಮತ್ತು ಅಗತ್ಯ ಕ್ರಮಕ್ಕಾಗಿ ಆಪ್ತ ಸಹಾಯಕರವರಿಗೆ ಸಲ್ಲಿಸಿದೆ.
7. ಮಾನ್ಯ ಅಧೀಕ್ಷಕರು, ತೋಟಗಾರಿಕೆ ಇಲಾಖೆ ರವರ ಅವಗಾಹನೆಗೆ ತರಲು ಹಾಗೂ ಅಗತ್ಯ ಕ್ರಮಕ್ಕಾಗಿ ಸಹಾಯಕರಿಗೆ ಸಲ್ಲಿಸಿದೆ.
8. ವೈದ್ಯಕೀಯ ಆರೋಗ್ಯ ಅಧಿಕಾರಿಗಳು, (ಪಶ್ಚಿಮ ವಲಯ) ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
9. ಕಾರ್ಯಪಾಲಕ ಅಭಿಯಂತರರು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
10. ಕಂದಾಯ ಅಧಿಕಾರಿಗಳು, ಮಹಾಲಕ್ಷ್ಮೀಪುರಂ ವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು ನಾಗಪುರ ಉಪವಿಭಾಗ ರವರಿಗೆ ಸೂಕ್ತ ಕ್ರಮವಹಿಸಲು ಸಲ್ಲಿಸಿದೆ.
12. ಸಹಾಯಕ ಕಂದಾಯ ಅಧಿಕಾರಿಗಳು ನಾಗಪುರ ಉಪವಿಭಾಗ ರವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
13. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪರಿಸರ ವಿಭಾಗ) ನಾಗಪುರ ಉಪವಿಭಾಗ ರವರ ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹಾಯಕ ಕಾರ್ಯಪಾಲಕ ಅಭಿಯಂತರರು, ವಿದ್ಯುತ್ ವಿಭಾಗ ರವರಿಗೆ ಸೂಕ್ತ ಕ್ರಮ ವಹಿಸಲು ಸಲ್ಲಿಸಿದೆ.
15. ಎಲ್ಲಾ ಸಂಬಂಧಪಟ್ಟವರ ಮಾಹಿತಿಗಾಗಿ ಮತ್ತು ಅಗತ್ಯ ಕ್ರಮಕ್ಕಾಗಿ ಸಲ್ಲಿಸಿದೆ.
16. ಕಛೇರಿಯ ಕಡತಕ್ಕೆ.

Scanned by CamScanner